ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-01.

ಸಂಖ್ಯೆ: ಸಿ3(7)ಪ್ರಾ.ಶಿ.ವರ್ಗಾ-01/2016-17 ದಿನಾಂಕ: 03-11-2016

## ಜ್ಞಾಪನ

ವಿಷಯ: 2016-17 ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಅಂತರ್ ಘಟಕ ವರ್ಗಾವಣೆಯಲ್ಲಿ ವರ್ಗಾವಣೆಯಾದ ಶಿಕ್ಷಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿದ ಮತ್ತು ಕರ್ತವ್ಯಕ್ಕೆ ಸೇರ್ಪಡೆಗೊಳಿಸಿಕೊಂಡ ಶಿಕ್ಷಕರ ಜಿಲ್ಲಾವಾರು ವಿವರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪತ್ರ ಸಂಖ್ಯೆ: ಸಿ3(7) ಪ್ರಾಶಾಶಿ ವರ್ಗಾ-01/2016-17 ದಿನಾಂಕ: 01/08/2016 ಮತ್ತು ಪತ್ರ ಸಂಖ್ಯೆ: ಸಿ4(7) ಪ್ರಾಶಾಶಿ. ವರ್ಗ-01/2016-17 ದಿನಾಂಕ: 09-08-2016

---0000---

2016-17ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದ ಮಾರ್ಗಸೂಚಿಗಳಿಗೆ ಅನುಸಾರವಾಗಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಅಂತರ್-ಘಟಕ ಪರಸ್ಪರ ಮತ್ತು ಕೋರಿಕೆ ವರ್ಗಾವಣೆಯನ್ನು ಕೌನ್ಸಿಲಿಂಗ್ ಮುಖಾಂತರ ಬೆಂಗಳೂರು, ಮೈಸೂರು, ಗುಲ್ಬರ್ಗಾ ಮತ್ತು ಧಾರವಾಡ ವಿಭಾಗಗಳಲ್ಲಿ ಹಮ್ಮಿಕೊಂಡು ಆಯಾ ವಿಭಾಗದ ವರ್ಗಾವಣಾ ಪ್ರಾಧಿಕಾರಿಗಳು ವರ್ಗಾವಣಾ ಆದೇಶವನ್ನು ಜಾರಿಗೊಳಿಸಿರುತ್ತಾರೆ. ಈ ಬಗ್ಗೆ ನಿಮ್ಮ ಜಿಲ್ಲೆಯಿಂದ ಹೊರಗೆ ಹೋಗುವ ಮತ್ತು ನಿಮ್ಮ ಜಿಲ್ಲೆಗೆ ವರ್ಗಾವಣೆಗೊಂಡ ಶಿಕ್ಷಕರ ವಿವರಗಳನ್ನು ವರ್ಗಾವಣಾ ತಂತ್ರಾಂಶದಲ್ಲಿಯೂ ಲಭ್ಯಪಡಿಸಲಾಗಿದೆ.

ಅದರಂತೆ ವರ್ಗಾವಣೆಗೊಂಡ ಎಲ್ಲಾ ಶಿಕ್ಷಕರುಗಳನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸುವುದು ಮತ್ತು ವರ್ಗಾಯಿತ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವ ಕ್ರಮಗಳನ್ನು ಕೈಗೊಂಡು ಬಿಡುಗಡೆಯಾದ ಮತ್ತು ಸೇರ್ಪಡೆಯಾದ ಶಿಕ್ಷಕರುಗಳ ಅಂಕಿ-ಅಂಶದ ವಿವರಗಳನ್ನು ಉಪನಿರ್ದೇಶಕರುಗಳು ದೃಢೀಕರಿಸಿ ಮರುಟಪಾಲಿನಲ್ಲಿ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

ಕರ್ತವ್ಯದಿಂದ ಬಿಡುಗಡೆಗೊಳಿಸಲು ಮತ್ತು ಹಾಜರುಪಡಿಸಿಕೊಳ್ಳಲು ವಿಳಂಬ ಧೋರಣೆ ಅನುಸರಿಸುವ ಸಂಬಂಧಪಟ್ಟ ಉಪನಿರ್ದೇಶಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ವಿರುದ್ಧ ಕರ್ತವ್ಯ ಲೋಪದ ಆರೋಪವನ್ನು ಗುರುತಿಸಿ ಶಿಸ್ತಿನ ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಸಿದೆ.

ಸಾಜಯ್ಯ, ಭಾ.ಆ.ಸೇ.
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

ಗೆ,

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಗತ್ಯ ಕ್ರಮಕ್ಕಾಗಿ,
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇವರ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು ಮಾಹಿತಿಗಾಗಿ

1) ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು
2) ನಿರ್ದೇಶಕರು (ಪ್ರೌಢಶಿಕ್ಷಣ) ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು
3) ಕಛೇರಿ ಪ್ರತಿ.